**ಕರ್ನಾಟಕ ವಿಧಾನ ಪರಿಷತ್ತು**

**ನೂರ ಐವತ್ತೊಂಭತ್ತನೆಯ ಅಧಿವೇಶನ**

# ನಾಡಪ್ರಭು ಕೆಂಪೇಗೌಡ ಪಾರಂಪರಿಕ ತಾಣದ ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ, 2026

**(2026ರ ವಿಧಾನಸಭೆಯ ವಿಧೇಯಕ ಸಂಖ್ಯೆ–13)**

**(ಕರ್ನಾಟಕ ವಿಧಾನಸಭೆಯಿಂದ ಅಂಗೀಕಾರವಾದ ರೂಪದಲ್ಲಿ)**

ನಾಡಪ್ರಭು ಕೆಂಪೇಗೌಡ ಪಾರಂಪರಿಕ ತಾಣದ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2018ಕ್ಕೆ ಮತ್ತಷ್ಟು ತಿದ್ದುಪಡಿ ಮಾಡಲು ಒಂದು ವಿಧೇಯಕ.

ಇಲ್ಲಿ ಇನ್ನುಮುಂದೆ ಕಂಡುಬರುವ ಉದ್ದೇಶಗಳಿಗಾಗಿ ನಾಡಪ್ರಭು ಕೆಂಪೇಗೌಡ ಪಾರಂಪರಿಕ ತಾಣದ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2018 (2018ರ ಕರ್ನಾಟಕ ಅಧಿನಿಯಮ 12)ನ್ನು ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ:

ಇದು ಭಾರತ ಗಣರಾಜ್ಯದ ಎಪ್ಪತ್ತೇಳನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನ ಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ನಾಡಪ್ರಭು ಕೆಂಪೇಗೌಡ ಪಾರಂಪರಿಕ ತಾಣದ ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ಅಧಿನಿಯಮ, 2026 ಎಂದು ಕರೆಯತಕ್ಕದ್ದು.

(2) ಇದು ಈ ಕೂಡಲೇ ಜಾರಿಗೆ ಬರತಕ್ಕದ್ದು.

**2. ಪ್ರಕರಣ 3ರ ತಿದ್ದುಪಡಿ.-** ನಾಡಪ್ರಭು ಕೆಂಪೇಗೌಡ ಪಾರಂಪರಿಕ ತಾಣದ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2018 (2018ರ ಕರ್ನಾಟಕ ಅಧಿನಿಯಮ ಸಂ. 12)ರ 3ನೇ ಪ್ರಕರಣದ, (4)ನೇ ಉಪಪ್ರಕರಣದಲ್ಲಿರುವ,-

(i) ಖಂಡ (ಬಿ) ಬದಲಾಗಿ, ಈ ಮುಂದಿನದನ್ನು ಪ್ರತಿಯೋಜಿಸತಕ್ಕದ್ದು, ಎಂದರೆ:-

| | |
|---|---|
| "(ಬಿ) ಉಪ ಮುಖ್ಯಮಂತ್ರಿ ಅಥವಾ ಕಂದಾಯದ ಪ್ರಭಾರದಲ್ಲಿರುವ ಮಂತ್ರಿ | -ಪದನಿಮಿತ್ತ ಉಪಾಧ್ಯಕ್ಷರು; |

(ii) ಖಂಡ (ಸಿ) ಮತ್ತು ಅದಕ್ಕೆ ಸಂಬಂಧಿಸಿದ ನಮೂದುಗಳನ್ನು ಬಿಟ್ಟುಬಿಡತಕ್ಕದ್ದು;

(iii) ಖಂಡ (ಡಿ) ತರುವಾಯ, ಈ ಮುಂದಿನದನ್ನು ಸೇರಿಸತಕ್ಕದ್ದು, ಎಂದರೆ:-

| | |
|---|---|
| "(ಡಿ-1) ಬೆಂಗಳೂರು ಅಭಿವೃದ್ಧಿ ಮಂತ್ರಿ | - ಪದನಿಮಿತ್ತ ಸದಸ್ಯರು; |
| (ಡಿ-2) ಬೆಂಗಳೂರು ದಕ್ಷಿಣ ಜಿಲ್ಲೆಯ ಪ್ರಭಾರದಲ್ಲಿರುವ ಮಂತ್ರಿ | -ಪದನಿಮಿತ್ತ ಸದಸ್ಯರು; |
| (ಡಿ-3) ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಪ್ರಭಾರದಲ್ಲಿರುವ ಮಂತ್ರಿ | - ಪದನಿಮಿತ್ತ ಸದಸ್ಯರು; |

(iv) ಖಂಡ (ಎಲ್) ಬದಲಿಗೆ, ಈ ಮುಂದಿನದನ್ನು ಪ್ರತಿಯೋಜಿಸತಕ್ಕದ್ದು, ಎಂದರೆ:-

| | |
|---|---|
| "(ಎಲ್) ರಾಜ್ಯ ಸರ್ಕಾರವು ನಾಮನಿರ್ದೇಶಿಸುವ ನಾಡಪ್ರಭು ಕೆಂಪೇಗೌಡರ ಇತಿಹಾಸ ಮತ್ತು ಪರಂಪರೆಯಲ್ಲಿ ತಜ್ಞರಾಗಿರುವ ಬೆಂಗಳೂರು ನಗರ ಜಿಲ್ಲೆ/ ಬೆಂಗಳೂರು ಗ್ರಾಮಾಂತರ ಜಿಲ್ಲೆ/ ಬೆಂಗಳೂರು ದಕ್ಷಿಣ ಜಿಲ್ಲೆಯ ಆರು ಸರ್ಕಾರೇತರ ಸದಸ್ಯರು | - ಸರ್ಕಾರೇತರ ಸದಸ್ಯರು" |

## ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ
**(ವಿಧೇಯಕವನ್ನು ಮಂಡಿಸುವಾಗ ಲಗತ್ತಿಸಿದಂತೆ)**

ನಾಡಪ್ರಭು ಕೆಂಪೇಗೌಡ ಪಾರಂಪರಿಕ ತಾಣದ ಅಭಿವೃದ್ಧಿ ಪ್ರಾಧಿಕಾರದ ಉಪಾಧ್ಯಕ್ಷರು, ಪದನಿಮಿತ್ತ ಸದಸ್ಯರು ಮತ್ತು ಸರ್ಕಾರೇತರ ಸದಸ್ಯರ ಕುರಿತಾದ ಉಪಬಂಧವನ್ನು ಪರಿಷ್ಕರಿಸಲು, ನಾಡಪ್ರಭು ಕೆಂಪೇಗೌಡ ಪಾರಂಪರಿಕ ತಾಣದ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2018 (2018ರ ಕರ್ನಾಟಕ ಅಧಿನಿಯಮ 12)ನ್ನು, ಮತ್ತಷ್ಟು ತಿದ್ದುಪಡಿ ಮಾಡುವುದು ಅವಶ್ಯಕವೆಂದು ಪರಿಗಣಿಸಿದೆ.

ಆದ್ದರಿಂದ ಈ ವಿಧೇಯಕ.

# **ಆರ್ಥಿಕ ಜ್ಞಾಪನ ಪತ್ರ**

ಪ್ರಸ್ತಾವಿತ ಶಾಸನಾತ್ಮಕ ಕ್ರಮವು ಯಾವುದೇ ಹೆಚ್ಚಿನ ವೆಚ್ಚವನ್ನು ಒಳಗೊಂಡಿರುವುದಿಲ್ಲ.

**ಡಾ. ಜಿ. ಪರಮೇಶ್ವರ**
ಉಪ ಮುಖ್ಯಮಂತ್ರಿ ಹಾಗೂ ಕಂದಾಯ ಮಂತ್ರಿ

**ಜ್ಯೋತಿ**
ಕಾರ್ಯದರ್ಶಿ (ಪ್ರ)
ಕರ್ನಾಟಕ ವಿಧಾನ ಪರಿಷತ್ತು

## ಅನುಬಂಧ

## ನಾಡಪ್ರಭು ಕೆಂಪೇಗೌಡ ಪಾರಂಪರಿಕ ತಾಣದ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2018

## (2018ರ ಕರ್ನಾಟಕ ಅಧಿನಿಯಮ ಸಂಖ್ಯೆ 12)ರ ಉದ್ಧೃತ ಭಾಗ

**XXX XXX XXX**

**3. ನಾಡಪ್ರಭು ಕೆಂಪೇಗೌಡ ಪರಂಪರೆ ತಾಣದ ಅಭಿವೃದ್ಧಿ ಪ್ರಾಧಿಕಾರ.-** (1) ಈ ಅಧಿನಿಯಮದ ಪ್ರಾರಂಭದ ತರುವಾಯ ಆದಷ್ಟು ಬೇಗನೆ, ಈ ಅಧಿನಿಯಮದ ಉದ್ದೇಶಗಳಿಗಾಗಿ ನಾಡಪ್ರಭು ಕೆಂಪೇಗೌಡ ಪಾರಂಪರಿಕ ಪ್ರದೇಶಾಭಿವೃದ್ಧಿ ಪ್ರಾಧಿಕಾರ ಎಂದು ಕರೆಯಲಾಗುವ ಒಂದು ಪ್ರಾಧಿಕಾರವನ್ನು ರಚಿಸತಕ್ಕದ್ದು.

(2) ಪ್ರಾಧಿಕಾರವು ಬೆಂಗಳೂರಿನಲ್ಲಿ ತನ್ನ ಕೇಂದ್ರ ಕಾರ್ಯಸ್ಥಾನವನ್ನು ಹೊಂದಿರತಕ್ಕದ್ದು.

(3) ಪ್ರಾಧಿಕಾರವು, ಶಾಶ್ವತ ಉತ್ತರಾಧಿಕಾರ ಮತ್ತು ಸಾಮಾನ್ಯ ಮೊಹರನ್ನು ಹೊಂದಿರುವ, ಚರ ಮತ್ತು ಸ್ಥಿರ ಸ್ವತ್ತುಗಳೆರಡನ್ನು ಆರ್ಜಿಸುವ, ಧಾರಣ ಮಾಡುವ ಮತ್ತು ವಿಲೆ ಮಾಡುವ ಹಾಗೂ ಕರಾರು ಮಾಡಿಕೊಳ್ಳುವ ಅಧಿಕಾರವನ್ನು ಹೊಂದಿರುವ, ಮೇಲೆ ಹೇಳಿದ ಹೆಸರಿನ ಒಂದು ನಿಗಮಿತ ನಿಕಾಯವಾಗಿರತಕ್ಕದ್ದು ಮತ್ತು ಸದರಿ ಹೆಸರಿನಿಂದ ದಾವೆ ಹೂಡತಕ್ಕದ್ದು ಮತ್ತು ದಾವೆಗೆ ಗುರಿಯಾಗತಕ್ಕದ್ದು

(4) ಪ್ರಾಧಿಕಾರವು ಈ ಮುಂದಿನ ಸದಸ್ಯರನ್ನು ಒಳಗೊಂಡಿರತಕ್ಕದ್ದು, ಎಂದರೆ:-

(ಎ) ಮುಖ್ಯಮಂತ್ರಿಯವರು - ಅಧ್ಯಕ್ಷರು;

(ಬಿ) ರಾಮನಗರದ ಉಸ್ತುವಾರಿ ಪ್ರಭಾರದಲ್ಲಿರುವ ಸಚಿವರು- ಉಪಾಧ್ಯಕ್ಷರು;

(ಸಿ) ಕಂದಾಯ ಮಂತ್ರಿಗಳು - ಪದನಿಮಿತ್ತ ಸದಸ್ಯರು;

(ಡಿ) ಕನ್ನಡ ಮತ್ತು ಸಂಸ್ಕೃತಿ ಮಂತ್ರಿಗಳು – ಪದನಿಮಿತ್ತ ಸದಸ್ಯರು;

(ಇ) ಬೆಂಗಳೂರು ಗ್ರಾಮಾಂತರ ಲೋಕಸಭಾ ಚುನಾವಣಾ ಕ್ಷೇತ್ರದ ಸಂಸತ್ ಸದಸ್ಯರು, ಬೆಂಗಳೂರು ನಗರವನ್ನು ಪ್ರತಿನಿಧಿಸುವ ಒಬ್ಬರು ರಾಜ್ಯಸಭಾ ಸದಸ್ಯರು ಮತ್ತು ಯಲಹಂಕ ಹಾಗೂ ಮಾಗಡಿ ಚುನಾವಣಾ ಕ್ಷೇತ್ರಗಳ ರಾಜ್ಯ ವಿಧಾನ ಸಭೆ ಸದಸ್ಯರು - ಪದನಿಮಿತ್ತ ಸದಸ್ಯರು;

(ಎಫ್) ಮೇಯರ್, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ - ಪದನಿಮಿತ್ತ ಸದಸ್ಯರು;

(ಜಿ) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಅಥವಾ ಪ್ರಧಾನ ಕಾರ್ಯದರ್ಶಿ ಅಥವಾ ಕಾರ್ಯದರ್ಶಿ, ಕಂದಾಯ ಇಲಾಖೆ - ಪದನಿಮಿತ್ತ ಸದಸ್ಯರು;

(ಎಚ್) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಅಥವಾ ಪ್ರಧಾನ ಕಾರ್ಯದರ್ಶಿ ಅಥವಾ ಕಾರ್ಯದರ್ಶಿ, ಆರ್ಥಿಕ ಇಲಾಖೆ - ಪದನಿಮಿತ್ತ ಸದಸ್ಯರು;

(ಐ) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಅಥವಾ ಪ್ರಧಾನ ಕಾರ್ಯದರ್ಶಿ ಅಥವಾ ಕಾರ್ಯದರ್ಶಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ - ಪದನಿಮಿತ್ತ ಸದಸ್ಯರು;

(ಜೆ) ಸರ್ಕಾರದ ಪ್ರಧಾನ ಕಾರ್ಯದರ್ಶಿ ಅಥವಾ ಕಾರ್ಯದರ್ಶಿ, ಪ್ರವಾಸೋದ್ಯಮ ಇಲಾಖೆ - ಪದನಿಮಿತ್ತ ಸದಸ್ಯರು;

(ಕೆ) ಪ್ರಾಧಿಕಾರದ ಆಯುಕ್ತರು - ಸದಸ್ಯ ಕಾರ್ಯದರ್ಶಿ;

(ಎಲ್) ನಾಡಪ್ರಭು ಕೆಂಪೇಗೌಡ ಇತಿಹಾಸ ಮತ್ತು ಪರಂಪರೆಯಲ್ಲಿ ತಜ್ಞರಾಗಿರುವ ರಾಜ್ಯ ಸರ್ಕಾರವು ನಾಮನಿರ್ದೇಶಿಸಬೇಕಾದ ಆರು ಸರ್ಕಾರೇತರ ಸದಸ್ಯರು - ಸರ್ಕಾರೇತರ ಸದಸ್ಯರು.

**XXX XXX XXX**

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ, ಬೆಂಗಳೂರು, ಕಾಸೂ , ಪ್ರತಿಗಳು 300, 20ನೇ ಆಗಸ್ಟ್ 2026